4. ಕಾರ್ಯದರ್ಶಿಯವರ ವರದಿ :

ಕಾರ್ಯದರ್ಶಿ : ಗೌರವಾನ್ವಿತ ಸಭಾದ್ಯಕ್ಷರ ಅನುಮೋದನೆಯೊಂದಿಗೆ ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ವರದಿಯನ್ನು ಮಂಡಿಸಲಾಯಿತು.

5. ಸಭೆಯ ಮುಂದಿಡಲಾಗುವ ಕಾಗದಪತ್ರಗಳು :

ಕಾರ್ಯದರ್ಶಿ : ಭಾರತ ಸಂವಿಧಾನದ 368ನೇ ಅನುಚ್ಛೇದದ (2)ನೇ ಖಂಡದ ಪರಂತುಕದ (ಡಿ) ಖಂಡದ ಮೇರೆಗೆ ಸಂಸತ್ತಿನ ಉಭಯ ಸದನಗಳು ಅಂಗೀಕರಿಸಿದಂತೆ ಸಂವಿಧಾನ (ಒಂದೂನೂರ ಒಂಭತ್ತನೇ ತಿದ್ದುಪಡಿ) ವಿಧೇಯಕ, 2009ರ ಪ್ರತಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

6. ನಿಲುವಳಿ ಸೂಚನೆ ಮಂಡನೆಗೆ ಅನುಮತಿ ಕೋರಿಕೆ :

ವಿಷಯ : ರಾಜ್ಯದಲ್ಲಿ ಬರ ಪರಿಸ್ಥಿತಿಯ ಬಗ್ಗೆ.

ಶ್ರೀ ಸಿದ್ದರಾಮಯ್ಯ (ವಿರೋಧ ಪಕ್ಷದ ನಾಯಕರು) : ಮಾನ್ಯ ಅಧ್ಯಕ್ಷರೆ, ನಾನು ಬೆಳಗ್ಗೆ ಒಂದು ನಿಲುವಳಿ ಸೂಚನೆಯನ್ನು ನಿಯಾಮವಳಿ 60ರ ಅಡಿಯಲ್ಲಿ ಕೊಟ್ಟಿದ್ದೇನೆ. ಇವತ್ತು ರಾಜ್ಯದಲ್ಲಿ ತೀವ್ರ ಬರಗಾಲವಿದೆ, ಗಂಭೀರವಾದ ಪರಿಸ್ಥಿತಿ ಇದೆಯೆಂದು ಸರ್ಕಾರವೇ ಘೋಷಣೆ ಮಾಡಿದೆ. ಸುಮಾರು 20 ಜಿಲ್ಲೆಗಳಲ್ಲಿ, 86 ತಾಲ್ಲೂಕುಗಳಲ್ಲಿ ತೀವ್ರ ಬರಗಾಲವಿದೆ. ಅನೇಕ ಭಾಗಗಳಲ್ಲಿ ಮಳೆಯಾಗಿದ್ದರೂ ಕೂಡ, ಬಿತ್ತನೆ ಮಾಡಿದ್ದರೂ ಕೂಡ ನಂತರ ಮಳೆ ಇಲ್ಲದೇ ಬೆಳೆ ನಷ್ಟವಾಗಿದೆ. ಬೀದರ್, ಗುಲ್ಬರ್ಗಾ, ಬಿಜಾಪುರ, ಬಳ್ಳಾರಿ, ಚಾಮರಾಜನಗರ, ಕೊಪ್ಪಳ, ರಾಯಚೂರು, ಈ ಎಲ್ಲಾ ಜಿಲ್ಲೆಗಳಲ್ಲಿ ಮುಂಗಾರು ಬೆಳೆಯ ಬಿತ್ತನೆ ಮಾಡಿದ್ದರೂ ಕೂಡ ಜುಲೈ 1 ತಾರೀಖಿನಿಂದ ಆಗಸ್ಟ್ 15 ತಾರೀಖಿನೊಳಗೆ ಮಳೆ ಬಾರದೇ, ಸುಮಾರು 20 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ಬೆಳೆ ಹಾನಿಯಾಗಿದೆ. ಸುಮಾರು 15 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ಬಿತ್ತನೆಯನ್ನೇ ಮಾಡುವುದಕ್ಕೆ ಆಗಲಿಲ್ಲ. ಮುಂಗಾರಿನಲ್ಲಿ ಒಟ್ಟು